## ಮಂಗಳೂರು ವಿಶ್ವವಿದ್ಯಾನಿಲಯ

**ದಿನಾಂಕ 15.09.2022ರಂದು ಪೂರ್ವಾಹ್ನ ಗಂಟೆ 10:00ಕ್ಕೆ ಸರಿಯಾಗಿ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ವಿಜ್ಞಾನ ಸಂಶೋಧನಾ ಕೇಂದ್ರ, ಬೆಳಪು, ಕಾಪು, ಉಡುಪಿ ಜಿಲ್ಲೆ ಇಲ್ಲಿ ನಡೆದ ಸಿಂಡಿಕೇಟಿನ 2022ನೇ ಸಾಲಿನ ಆರನೆಯ ಸಾಮಾನ್ಯ ಸಭೆಯ ನಡವಳಿಗಳು.**

**ಉಪಸ್ಥಿತರು:**

| ಕ್ರ. ಸಂ. | | | ಸಹಿ |
|---|---|---|---|
| 1. | ಪ್ರೊ. ಪಿ. ಸುಬ್ರಹ್ಮಣ್ಯ ಯಡಪಡಿತ್ತಾಯ<br>ಕುಲಪತಿಗಳು | ಅಧ್ಯಕ್ಷರು | |
| 2. | ಡಾ. ಜೆನಿಫರ್ ಲೋಲಿಟಾ ಸಿ.,<br>ಜಂಟಿ ನಿರ್ದೇಶಕರು,<br>(ಕಾಲೇಜು ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 3. | ಶ್ರೀ ರವಿಚಂದ್ರ ಪಿ.ಎಂ. | ಸದಸ್ಯರು | |
| 4. | ಡಾ. ಜೆರಾಲ್ಡ್ ಸಂತೋಷ್ ಡಿ'ಸೋಜ,<br>ಡೀನರು | ಸದಸ್ಯರು | |
| 5. | ಡಾ. ಶಂಕರ ಭಟ್ ಪಿ. | ಸದಸ್ಯರು | |
| 6. | ಶ್ರೀಮತಿ ಸುಭಾಶಿಣಿ ಶ್ರೀವತ್ಸ | ಸದಸ್ಯರು | |
| 7. | ಶ್ರೀ ಮೋಹನ್ ನಾಯ್ಕ್,<br>(online ಮೂಲಕ) | ಸದಸ್ಯರು | |
| 8. | ಶ್ರೀ ಕೆ. ರಮೇಶ | ಸದಸ್ಯರು | |
| 9. | ಶ್ರೀ ವಿವೇಕಾನಂದ ಪನಿಯಾಳ<br>(online ಮೂಲಕ) | ಸದಸ್ಯರು | |
| 10. | ಶ್ರೀ ರವೀಂದ್ರನಾಥ ರೈ | ಸದಸ್ಯರು | |
| 11. | ಡಾ. ಎಂ. ಎಸ್. ತಳವಾರ<br>(online ಮೂಲಕ) | ಸದಸ್ಯರು | |
| 12. | ಶ್ರೀ ಮೋಹನ್ ಪಡಿವಾಳ್ | ಸದಸ್ಯರು | |
| 13. | ಡಾ. ಎ. ಪಾರ್ವತಿ ಅಪ್ಪಯ್ಯ | ಸದಸ್ಯರು | |
| 14. | ಪ್ರೊ. ವಿಶ್ವನಾಥ್. ಪ್ರಾಧ್ಯಾಪಕರು | ಸದಸ್ಯರು | |
| 15. | ಡಾ. ಸಿಪ್ರಿಯನ್ ಮೊಂತೇರೋ<br>ಪ್ರಾಂಶುಪಾಲರು, ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ<br>(ಸಾರ್ವಜನಿಕ ಶಿಕ್ಷಣ ಆಯುಕ್ತರ ಪರವಾಗಿ) | ಸದಸ್ಯರು | |
| 16. | ಪ್ರೊ. ಪಿ. ಎಲ್. ಧರ್ಮ<br>ಕುಲಸಚಿವರು (ಪರೀಕ್ಷಾಂಗ) | ಸದಸ್ಯರು | |
| 17. | ಪ್ರೊ. ಕೆ. ಎಸ್. ಜಯಪ್ಪ<br>ಹಣಕಾಸು ಅಧಿಕಾರಿ (ಪ್ರಭಾರ) | ವಿಶೇಷ<br>ಆಹ್ವಾನಿತರು | |
| 18. | ಪ್ರೊ. ಕಿಶೋರ್ ಕುಮಾರ್ ಸಿ. ಕೆ.<br>ಕುಲಸಚಿವರು (ಆಡಳಿತ) | ಸದಸ್ಯ<br>ಕಾರ್ಯದರ್ಶಿ | |

## ಪ್ರಾರಂಭಿಕ

ಪ್ರಾರಂಭದಲ್ಲಿ ಕುಲಸಚಿವರು ಸಭಾಧ್ಯಕ್ಷರಾದ ಮಾನ್ಯ ಕುಲಪತಿಗಳು ಹಾಗೂ ಎಲ್ಲಾ ಸಿಂಡಿಕೇಟು ಸದಸ್ಯರುಗಳನ್ನು ಸಭೆಗೆ ಸ್ವಾಗತಿಸಿದರು.

ಮಂಗಳೂರು ವಿಶ್ವವಿದ್ಯಾನಿಲಯದ ಆರನೆಯ ಸಾಮಾನ್ಯ ಸಭೆಯನ್ನು "ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ವಿಜ್ಞಾನ ಸಂಶೋಧನಾ ಕೇಂದ್ರ, ಬೆಳಪು, ಕಾಪು, ಉಡುಪಿ ಜಿಲ್ಲೆ" ಇಲ್ಲಿ ಆಯೋಜಿಸಿರುವುದು ವಿಶ್ವವಿದ್ಯಾನಿಲಯದ ಹೆಮ್ಮೆಯ ವಿಷಯವೆಂದು ಕುಲಸಚಿವರು ಸಭೆಗೆ ತಿಳಿಸಿದರು.

ಸಭೆಯನ್ನು ಪ್ರಾರಂಭಿಸುವ ಮೊದಲು ಮಂಗಳೂರು ವಿಶ್ವವಿದ್ಯಾನಿಲಯದ ಪ್ರಥಮ ಕುಲಪತಿಗಳಾಗಿದ್ದ ಪ್ರೊ. ಬಿ. ಶೇಕ್ ಆಲಿ ಇವರು ದಿನಾಂಕ 01.09.2022ರಂದು ದೈವಾಧೀನರಾಗಿರುವ ವಿಷಯವನ್ನು ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದರು. ಪ್ರೊ. ಬಿ. ಶೇಕ್ ಆಲಿ ಇವರು ದಿನಾಂಕ 10.09.1980 ರಿಂದ ದಿನಾಂಕ 14.03.1985ರ ವರೆಗೆ ಮಂಗಳೂರು ವಿಶ್ವವಿದ್ಯಾನಿಲಯದ ಕುಲಪತಿಗಳಾಗಿ ಅಧಿಕಾರ ವಹಿಸಿಕೊಂಡಿದ್ದ ಅವಧಿಯಲ್ಲಿ ಸಿಂಡಿಕೇಟು, ಶೈಕ್ಷಣಿಕ ಮಂಡಳಿ ಹಾಗೂ ಇತರೇ ಪ್ರಾಧಿಕಾರಗಳ ಅಧ್ಯಕ್ಷರಾಗಿದ್ದು, ಮಂಗಳೂರು ವಿಶ್ವವಿದ್ಯಾನಿಲಯದ ಆಡಳಿತ ಮತ್ತು ಉನ್ನತ ಶಿಕ್ಷಣದ ಸರ್ವಾಂಗೀಣ ಅಭಿವೃದ್ಧಿಯಲ್ಲಿ ಮಹತ್ವದ ಪಾತ್ರ ವಹಿಸಿದ್ದರು. ಇವರ ನಿಧನಕ್ಕೆ ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟು ಸಭೆಯು ತನ್ನ ಸಂತಾಪವನ್ನು ವ್ಯಕ್ತಪಡಿಸುತ್ತಾ ಅಗಲಿದ ದಿವ್ಯಾತ್ಮಕ್ಕೆ ಪರಮಾತ್ಮನು ಚಿರಶಾಂತಿಯನ್ನು ನೀಡಲೆಂದು ಎರಡು ನಿಮಿಷಗಳ ಮೌನ ಪ್ರಾರ್ಥನೆಯನ್ನು ಸಲ್ಲಿಸಲಾಯಿತು. ಅವರ ಅಗಲಿಕೆಯ ದುಃಖವನ್ನು ಸಹಿಸಿಕೊಳ್ಳುವ ಶಕ್ತಿಯನ್ನು ಕುಟುಂಬದವರಿಗೆ ಹಾಗೂ ಶಿಷ್ಯವರ್ಗಕ್ಕೆ ನೀಡಲಿ ಎಂದು ಪರಮಾತ್ಮನಲ್ಲಿ ಬೇಡುತ್ತಾ ಸಂತಾಪ ಸೂಚಕ ನಿರ್ಣಯವನ್ನು ಸಿಂಡಿಕೇಟು ಸಭೆಯು ಅಂಗೀಕರಿಸಿತು.

## I. ನಡವಳಿಗಳ ದೃಢೀಕರಣ

1. ದಿನಾಂಕ 23.07.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಐದನೇ ಸಾಮಾನ್ಯ ಸಭೆಯ ನಡವಳಿಯ ದೃಢೀಕರಣ.

ದಿನಾಂಕ 23.07.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಐದನೇ ಸಾಮಾನ್ಯ ಸಭೆಯ ನಡವಳಿಯನ್ನು ಈ ಕೆಳಗಿನ ತಿದ್ದುಪಡಿಯೊಂದಿಗೆ ದೃಢೀಕರಿಸಲಾಯಿತು.

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಡಿಇವಿ:ಸಾಸ.5:35(2022) |
| **ವಿಷಯ:** | ಮಂಗಳೂರು ವಿಶ್ವವಿದ್ಯಾನಿಲಯದ ಮತ್ತು ಸ್ನಾತಕೋತ್ತರ ಕೇಂದ್ರ, ಚಿಕ್ಕ ಅಳುವಾರದ ವಿವಿಧ ಸ್ನಾತಕೋತ್ತರ ವಿಭಾಗ/ಕೋರ್ಸುಗಳಿಗೆ Adjunct Faculty ಗಳ ನೇಮಕಾತಿ ಬಗ್ಗೆ. |
| **ತಿದ್ದುಪಡಿ ನಿರ್ಣಯ:** | ಅನುಮೋದಿಸಲಾಯಿತು. ಮುಂದುವರಿದು, Adjunct Faculty ಗಳ ಸೇವೆಯನ್ನು ಯುಜಿಸಿ ನಿಯಮಾವಳಿಯಂತೆ ಬಳಸಿಕೊಳ್ಳಬೇಕೆಂಬುದಾಗಿ ನಿರ್ಣಯಿಸಲಾಯಿತು. |

| | |
|---|---|
| **ಕಾರ್ಯಸೂಚಿ ಸಂಖ್ಯೆ:** | ಸಿಂಡಿಕೇಟು:ಸಾಸ.5:43(2022) |
| **ವಿಷಯ:** | ಶ್ರೀ ರಮೇಶ ಕೆ., ಸಿಂಡಿಕೇಟ್ ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ – ವಿಶ್ವವಿದ್ಯಾನಿಲಯ ಮತ್ತು ಘಟಕ ಕಾಲೇಜಿನ ಅತಿಥಿ ಉಪನ್ಯಾಸಕರು ಹಾಗೂ ಶಿಕ್ಷಕೇತರ ಮಹಿಳಾ ನೌಕರರಿಗೆ ಮಾತೃತ್ವ (ಹೆರಿಗೆ) ರಜೆ ಸೌಲಭ್ಯವನ್ನು ನಮ್ಮ ವಿ.ವಿ.ಯಲ್ಲಿ ಜಾರಿಗೆ ತರುವ ಕುರಿತಂತೆ. |

**ತಿದ್ದುಪಡಿ ನಿರ್ಣಯ:** ಹೊರಗುತ್ತಿಗೆ ಆಧಾರದಲ್ಲಿರುವ ಮಹಿಳಾ ನೌಕರರಿಗೆ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಆಇ 08 ಎಸ್ಆರ್ಎಸ್ 2022 ದಿನಾಂಕ 23.06.2022ರಂತೆ ಹೆರಿಗೆ ರಜೆ ಸೌಲಭ್ಯವನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಜಾರಿಗೊಳಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಮುಂದುವರಿದು, ವಿಶ್ವವಿದ್ಯಾನಿಲಯದ ತಾತ್ಕಾಲಿಕ ಮತ್ತು ಅತಿಥಿ ಉಪನ್ಯಾಸಕರಿಗೆ 4 ತಿಂಗಳ ಹೆರಿಗೆ ರಜೆಯನ್ನು **ವೇತನ ಸಹಿತ** ಮಂಜೂರು ಮಾಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

ಈ ಕೆಳಗಿನ ಕಾರ್ಯಸೂಚಿಗಳ ವಿಷಯಗಳಲ್ಲಿ ನಮೂದಿತವಾದ ಬೆರಳಚ್ಚು ದೋಷಗಳನ್ನು ಸರಿಪಡಿಸಲಾಗಿದೆ. **ನಿರ್ಣಯಗಳಲ್ಲಿ ಯಾವುದೇ ತಿದ್ದುಪಡಿ ಇರುವುದಿಲ್ಲ.**

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ಸಾಸ.5:19(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ Central Facility on IOT & Cloud Based System Lab ನಲ್ಲಿರುವ ಲ್ಯಾಪ್‌ಟಪ್‌ಗಳ ಬ್ಯಾಟರಿಗಳನ್ನು ಬದಲಾಯಿಸುವ ಹಾಗೂ ಲ್ಯಾಪ್‌ಟಾಪ್‌ನ internal memory spaceನ್ನು 4 GB RAM ನಿಂದ 8 GB RAMಗೆ ಉನ್ನತೀಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 15.06.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಕಾನೂನು ಘಟಕ:ಸಾಸ.5:45(2022)

**ವಿಷಯ:** ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಡಾ. ಅರಬಿ ಯು. ಪ್ರಾಧ್ಯಾಪಕರು ಅರ್ಥಶಾಸ್ತ್ರ ವಿಭಾಗ ಇವರು ಹೂಡಿರುವ ರಿಟ್ ಅರ್ಜಿ ಸಂಖ್ಯೆ:15070/2020 ಗೆ ಸಂಬಂಧಿಸಿದಂತೆ ನೀಡಿರುವ ತೀರ್ಪನ್ನು ಪ್ರಶ್ನಿಸಿ ಮಂಗಳೂರು ವಿಶ್ವವಿದ್ಯಾನಿಲಯವು ಹೂಡಿರುವ ರಿಟ್ ಅಪೀಲ್ ಸಂಖ್ಯೆ: 1081/2021ಗೆ ಸಂಬಂಧಿಸಿದಂತೆ ವಿಶ್ವವಿದ್ಯಾನಿಲಯದ ಪರ ವಕೀಲರಾದ ಅರುಣ ಶ್ಯಾಂ ಅಸೋಸಿಯೇಟ್ಸ್ ಇವರು ಕಳುಹಿಸಿರುವ ಹಿರಿಯ ನ್ಯಾಯವಾದಿ ಶ್ರೀ ಅರುಣ ಶ್ಯಾಂ ಇವರ ಬಿಲ್ಲಿನ ಮೊತ್ತ ಪಾವತಿ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

## II. ಅನುಸರಣಾ ವರದಿಯ ಅನುಮೋದನೆ

1. ದಿನಾಂಕ 11.06.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ನಾಲ್ಕನೇ ವಿಶೇಷ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

   **– ಅನುಮೋದಿಸಲಾಯಿತು. –**

2. ದಿನಾಂಕ 18.06.2022ರಂದು ನಡೆದ ಸಿಂಡಿಕೇಟಿನ 2022ನೇ ಸಾಲಿನ ಐದನೇ ವಿಶೇಷ ಸಭೆಯ ನಿರ್ಣಯದ ಮೇಲೆ ತೆಗೆದುಕೊಂಡ ಕ್ರಮದ ಅನುಸರಣಾ ವರದಿಯ ಅನುಮೋದನೆ.

   **– ಅನುಮೋದಿಸಲಾಯಿತು. –**

## ಪ್ರಾಸ್ತಾವಿಕ

ಮಾನ್ಯ ಕುಲಪತಿಗಳು ಈ ಕೆಳಗಿನ ವಿಷಯಗಳನ್ನು ಸಭೆಗೆ ತಿಳಿಸಿದರು.

1. ಮಂಗಳೂರು ವಿಶ್ವವಿದ್ಯಾನಿಲಯದ ಸಂಸ್ಥಾಪನಾ ದಿನಾಚರಣೆಯನ್ನು ದಿನಾಂಕ 29.09.2022ರಂದು ನಡೆಸಲು ನಿರ್ಧರಿಸಲಾಗಿರುವ ವಿಷಯವನ್ನು ಸಭೆಗೆ ತಿಳಿಸುತ್ತಾ, ಸದರಿ ದಿನದಂದು ಸಾಮಾಜಿಕ ಮತ್ತು ಗ್ರಾಮೀಣ ಕ್ಷೇತ್ರದಲ್ಲಿ ಗಣನೀಯ ಸೇವೆ ಸಲ್ಲಿಸಿದ ಅಥವಾ ಸಾಧನೆ ಮಾಡಿರುವ ವ್ಯಕ್ತಿಗಳನ್ನು ಗುರುತಿಸಿ ಸನ್ಮಾನಿಸುವ ಬಗ್ಗೆ ಈಗಾಗಲೇ ಸಮಿತಿ ರಚನೆಯಾಗಿದ್ದು ಶೀಘ್ರದಲ್ಲಿ ಹೆಸರುಗಳನ್ನು ಅಂತಿಮಗೊಳಿಸಲಾಗುವುದಾಗಿ ಸಭೆಗೆ ತಿಳಿಸಿದರು.
2. Double Entry System ನ್ನು ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅಳವಡಿಸಿಕೊಳ್ಳುವ ಕಾರ್ಯದ ಪ್ರಗತಿ ಬಗ್ಗೆ ಸಿಂಡಿಕೇಟು ಸದಸ್ಯರಾದ ಶ್ರೀ ಮೋಹನ್ ಪಡಿವಾಳ್ ಇವರು ಮಾತನಾಡುತ್ತಾ ವಿಷಯಕ್ಕೆ ಸಂಬಂಧಿಸಿ ಬಹುತೇಕ ಕಾರ್ಯಗಳು ಪೂರ್ಣಗೊಂಡಿದ್ದು, ಬಾಕಿ ಉಳಿದಿರುವ ಕೆಲಸ ಕಾರ್ಯಗಳನ್ನು ಶೀಘ್ರದಲ್ಲಿ ಪೂರ್ಣಗೊಳಿಸಬೇಕೆಂಬುದಾಗಿರುವ ತಮ್ಮ ಆಶಯವನ್ನು ಸಭೆಯ ಮುಂದೆ ಮಂಡಿಸಿದರು.
   ಸಿಂಡಿಕೇಟು ಸದಸ್ಯರಾದ ಪ್ರೊ. ವಿಶ್ವನಾಥ ಇವರು ಮಾತನಾಡುತ್ತಾ, ಸ್ನಾತಕೋತ್ತರ ವಿಭಾಗಗಳಲ್ಲಿರುವ ಹಳೆಯ ಪೀಠೋಪಕರಣ, ಇಲೆಕ್ಟ್ರಾನಿಕ್ಸ್ ಸಾಮಾಗ್ರಿಗಳು ಇತ್ಯಾದಿಗಳ ಮೌಲ್ಯ ನಿಗದಿಪಡಿಸಿ ದೃಢೀಕರಣ ನೀಡುವುದು ವಿಭಾಗಗಳ ಮುಖ್ಯಸ್ಥರುಗಳಿಗೆ ಕಷ್ಟಸಾಧ್ಯವಾಗಿರುವ ವಿಚಾರವನ್ನು ತಿಳಿಸಿದರು.
   ಅಂತಿಮವಾಗಿ ಕುಲಪತಿಗಳು, ಕುಲಸಚಿವರು, ಹಣಕಾಸು ಅಧಿಕಾರಿ ಮತ್ತು ಸಿಂಡಿಕೇಟು ಸದಸ್ಯರಾದ ಶ್ರೀ ಮೋಹನ್ ಪಡಿವಾಳ್ ಹಾಗೂ ಶ್ರೀ ವಾಮನ್ ಕಾಮತ್, ಕಾಮತ್ ಆ್ಯಂಡ್ ಕಾಮತ್ ಅಸೋಸಿಯೇಟ್ಸ್ ಇವರುಗಳನ್ನೊಳಗೊಂಡ ಸಮಿತಿಯನ್ನು ರಚಿಸಿ ಒಂದು ವಾರದ ಒಳಗಾಗಿ ಸಭೆ ಸೇರಿ ಅಂತಿಮ ನಿರ್ಧಾರ ಕೈಗೊಳ್ಳುವುದಾಗಿ ಮಾನ್ಯ ಕುಲಪತಿಗಳು ಸಭೆಗೆ ತಿಳಿಸಿದರು.
3. ಕುಂದ ಕನ್ನಡ ಅಧ್ಯಯನ ಪೀಠಕ್ಕೆ ಅನುದಾನಕ್ಕಾಗಿ ಕನ್ನಡ ಸಾಹಿತ್ಯ ಪ್ರಾಧಿಕಾರ, ಕನ್ನಡ ಸಾಹಿತ್ಯ ಅಕಾಡೆಮಿ, ಹೊರನಾಡು ಗಡಿನಾಡು ಪ್ರಾಧಿಕಾರಗಳಿಗೆ ಶ್ರೀ ಜಯಪ್ರಕಾಶ್ ಹೆಗಡೆ ಇವರ ಮೂಲಕ ಪತ್ರ ಬರೆಯಲಾಗುವುದೆಂಬುದಾಗಿ ಸಭೆಗೆ ತಿಳಿಸಿದರು.
4. ಸೆಪ್ಟೆಂಬರ್ 2022ರಲ್ಲಿ ನಡೆದ ಮಂಗಳೂರು ವಿಶ್ವವಿದ್ಯಾನಿಲಯದ ಪದವಿ ಮಟ್ಟದ ಬಿ.ಬಿ.ಎ. ಕಾರ್ಯಕ್ರಮದ ದ್ವಿತೀಯ ಸೆಮೆಸ್ಟರ್‌ನ ಕನ್ನಡ ಭಾಷಾ ಪರೀಕ್ಷೆಯಲ್ಲಿ ಉಂಟಾದ ಗೊಂದಲದ ಬಗ್ಗೆ ಕುಲಸಚಿವರು (ಪರೀಕ್ಷಾಂಗ) ಇವರು ಸಭೆಗೆ ವಿವರಿಸಿದರು. ಪ್ರಶ್ನೆ ಪತ್ರಿಕೆ ತಯಾರು ಮಾಡಿರುವ ಪರೀಕ್ಷಾ ಮಂಡಳಿಯ ಅಧ್ಯಕ್ಷರಿಂದ ವಿವರಣೆಯನ್ನು ಪಡೆದಿದ್ದು, ಸದರಿಯವರು ವಿವರಣೆ ನೀಡಿ ಕ್ಷಮಾಪಣೆಯನ್ನು ಕೋರಿರುವ ವಿಷಯವನ್ನು ಸಭೆಯ ಗಮನಕ್ಕೆ ತಂದರು. ಈ ಬಗ್ಗೆ ಸಭೆಯಲ್ಲಿ ಚರ್ಚಿಸಲಾಗಿ, ತಪ್ಪಿತಸ್ಥರಿಗೆ ವಿಶ್ವವಿದ್ಯಾನಿಲಯದ ನಿಯಮಾನುಸಾರ ಶಿಕ್ಷೆ ವಿಧಿಸಬೇಕೆಂಬುದಾಗಿ ಸಭೆಯಲ್ಲಿ ನಿರ್ಣಯಿಸಲಾಯಿತು.

## I. ಈ ಸಿಂಡಿಕೇಟು ಸಭೆಗೆ ಮಂಡಿಸಿರುವ ಕಾರ್ಯಸೂಚಿಗಳು:

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:1(2022)
**ವಿಷಯ:** ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಸ್ನಾತಕೋತ್ತರ ರಾಜ್ಯಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:2(2022)
**ವಿಷಯ:** ಎಂ.ಕಾಂ. (ಹೆಚ್.ಆರ್.ಡಿ.) ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಎಂ.ಕಾಂ. (ಹೆಚ್.ಆರ್.ಡಿ.) ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:3(2022)
**ವಿಷಯ:** ಸ್ನಾತಕೋತ್ತರ ಪರಿಸರ ವಿಜ್ಞಾನ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಸ್ನಾತಕೋತ್ತರ ಪರಿಸರ ವಿಜ್ಞಾನ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:4(2022)
**ವಿಷಯ:** ಸ್ನಾತಕೋತ್ತರ ಅನ್ವಯಿಕ ಸಸ್ಯಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಸ್ನಾತಕೋತ್ತರ ಅನ್ವಯಿಕ ಸಸ್ಯಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:5(2022)
**ವಿಷಯ:** ಸ್ನಾತಕೋತ್ತರ ಅನ್ವಯಿಕ ಪ್ರಾಣಿಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಸ್ನಾತಕೋತ್ತರ ಅನ್ವಯಿಕ ಪ್ರಾಣಿಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:6(2022)
**ವಿಷಯ:** ಸ್ನಾತಕೋತ್ತರ ವಸ್ತುವಿಜ್ಞಾನ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಸ್ನಾತಕೋತ್ತರ ವಸ್ತುವಿಜ್ಞಾನ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:7(2022)
**ವಿಷಯ:** ಸ್ನಾತಕೋತ್ತರ ಭೂಗೋಳಶಾಸ್ತ್ರ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಸ್ನಾತಕೋತ್ತರ ಭೂಗೋಳಶಾಸ್ತ್ರ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:8(2022)
**ವಿಷಯ:** ಪದವಿ ಮತ್ತು ಸ್ನಾತಕೋತ್ತರ ಸೂಕ್ಷ್ಮಾಣು ಜೀವವಿಜ್ಞಾನ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಪದವಿ ಮತ್ತು ಸ್ನಾತಕೋತ್ತರ ಸೂಕ್ಷ್ಮಾಣು ಜೀವವಿಜ್ಞಾನ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:9(2022)
**ವಿಷಯ:** ಪದವಿ ಮತ್ತು ಸ್ನಾತಕೋತ್ತರ ಬಯೋಟೆಕ್ನಾಲಜಿ ಸಂಯುಕ್ತ ಅಧ್ಯಯನ ಮಂಡಳಿಯ ಪುನರ್ರಚನೆಯ ಬಗ್ಗೆ.
**ನಿರ್ಣಯ:** ಪದವಿ ಮತ್ತು ಸ್ನಾತಕೋತ್ತರ ಬಯೋಟೆಕ್ನಾಲಜಿ ಸಂಯುಕ್ತ ಅಧ್ಯಯನ ಮಂಡಳಿಯನ್ನು ಪುನರ್ರಚಿಸುವ ಅಧಿಕಾರವನ್ನು ಮಾನ್ಯ ಕುಲಪತಿಗಳಿಗೆ ನೀಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:10(2022)

**ವಿಷಯ:** ಸರ್ಕಾರದ ಸುತ್ತೋಲೆಯಲ್ಲಿಯ ಮಾರ್ಗಸೂಚಿಗಳನ್ನು ಪರಿನಿಯಮದಲ್ಲಿ ಅಳವಡಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯೊಂದಿಗೆ ಲಗತ್ತಿಸಲಾದ "Statute Governing Rules of Business of the Executive Council/Syndicate/Board of Management" ನ ಕಲಂ 21ನ್ನು ಅಳಿಸಿ, ಪರಿನಿಯಮವನ್ನು ಸರಕಾರದ ಅನುಮೋದನೆಗೆ ಕಳುಹಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:11(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸಿಂಡಿಕೇಟಿಗೆ ಡಾ. ಸುಭಾಷಿನಿ ಶ್ರೀವತ್ಸರವರ ನಾಮನಿರ್ದೇಶನದ ಬಗ್ಗೆ.

**ನಿರ್ಣಯ:** ಡಾ. ಸುಭಾಷಿನಿ ಶ್ರೀವತ್ಸ ಇವರನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾನಿಲಯದ ಅಧಿನಿಯಮ 2000ದ ಪ್ರಕರಣ 28 (1) (ಎಫ್) ಪ್ರಕಾರ ಮಂಗಳೂರು ವಿಶ್ವವಿದ್ಯಾನಿಲಯದ ಸಂಯೋಜಿತ ಕಾಲೇಜುಗಳ ಪ್ರಾಂಶುಪಾಲರುಗಳ ಜೇಷ್ಠತಾ ಪಟ್ಟಿ ದಿನಾಂಕ 01.07.2016 ರಂತೆ ಪ್ರಾಂಶುಪಾಲರ ಜೇಷ್ಠತೆ ಮತ್ತು ಸರದಿಯ ನೆಲೆಯಲ್ಲಿ ನಾಮನಿರ್ದೇಶನ ಮಾಡಲಾಗಿದ್ದು, ಡಾ. ಸುಭಾಷಿನಿ ಶ್ರೀವತ್ಸ ಇವರನ್ನು ಸದರಿಯವರ ಸಿಂಡಿಕೇಟು ಸದಸ್ಯತ್ವದ ಅವಧಿವರೆಗೆ ಮುಂದುವರಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.6:12(2022)

**ವಿಷಯ:** ಘಟಿಕೋತ್ಸವ ಕಾರ್ಯಕ್ರಮವನ್ನು ನಿಯಂತ್ರಿಸುವ ಪರಿನಿಯಮಕ್ಕೆ ತಿದ್ದುಪಡಿ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:13(2022)

**ವಿಷಯ:** ತಾತ್ಕಾಲಿಕ ನೆಲೆಯಲ್ಲಿ ಸಿಬ್ಬಂದಿಗಳ ಸೇವೆಯನ್ನು ಬಳಸಿಕೊಂಡಿರುವುದಕ್ಕೆ ಘಟನೋತ್ತರ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.6:14(2022)

**ವಿಷಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ಕಾಲೇಜು ಅಭಿವೃದ್ಧಿ ಸಮಿತಿಯ ಕಾರ್ಯವ್ಯಾಪ್ತಿ ಹಾಗೂ ರೂಪುರೇಷೆಗಳನ್ನು ರೂಪಿಸುವ ಕುರಿತು.

**ನಿರ್ಣಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿನ ಕಾಲೇಜು ಅಭಿವೃದ್ಧಿ ಸಮಿತಿಯ ಕಾರ್ಯವ್ಯಾಪ್ತಿ ಹಾಗೂ ರೂಪುರೇಷೆಗಳನ್ನು ರೂಪಿಸಲು ಈ ಕೆಳಕಂಡ ಸಮಿತಿಯನ್ನು ರಚಿಸಲಾಯಿತು.

1. ಶ್ರೀ ಶಂಕರ ಭಟ್ ಪಿ. – ಅಧ್ಯಕ್ಷರು
   ಮಾನ್ಯ ಸಿಂಡಿಕೇಟು ಸದಸ್ಯರು
2. ಶ್ರೀ ರವಿಚಂದ್ರ ಪಿ. ಎಂ. – ಸದಸ್ಯರು
   ಮಾನ್ಯ ಸಿಂಡಿಕೇಟು ಸದಸ್ಯರು

3. ಶ್ರೀ ರಮೇಶ್ – ಸದಸ್ಯರು
   ಮಾನ್ಯ ಸಿಂಡಿಕೇಟು ಸದಸ್ಯರು
4. ಉಪಕುಲಸಚಿವರು (ಕುಲಸಚಿವರ ಕಛೇರಿ) – ಸದಸ್ಯ ಸಂಚಾಲಕರು

ಸಮಿತಿಯ ಕಾರ್ಯವ್ಯಾಪ್ತಿಯನ್ನು ಅಧಿಸೂಚನೆಯಲ್ಲಿ ನಿಗದಿಪಡಿಸುವುದು. ಮುಂದುವರಿದು, ಸಮಿತಿಯನ್ನು ರಚಿಸಿದ ಒಂದು ತಿಂಗಳ ಒಳಗಾಗಿ ಸಭೆ ಸೇರಿ ವರದಿಯನ್ನು ವಿಶ್ವವಿದ್ಯಾನಿಲಯಕ್ಕೆ ಸಲ್ಲಿಸುವಂತೆ ಅಧಿಸೂಚನೆಯಲ್ಲಿ ನಮೂದಿಸುವುದು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.6:15(2022)
**ವಿಷಯ:** 2021–22ನೇ ಸಾಲಿನ ಪಂಚಾಯತ್ ತೆರಿಗೆ ಪಾವತಿಸಿರುವ ಕುರಿತು.
**ನಿರ್ಣಯ:** ಘಟನೋತ್ತರವಾಗಿ ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.6:16(2022)
**ವಿಷಯ:** ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇಲ್ಲಿನ ಕಾಲೇಜು ಅಭಿವೃದ್ಧಿ ಸಮಿತಿ ಸಾಮಾನ್ಯ ಸಭೆಯ ನಡವಳಿಯ ಬಗ್ಗೆ.
**ನಿರ್ಣಯ:** ನಡವಳಿಯನ್ನು ಸಿಂಡಿಕೇಟು ಗಮನಿಸಿತು. ನಡವಳಿಯ ಕಾರ್ಯಸೂಚಿ ಸಂಖ್ಯೆ 1 ಮತ್ತು 15 ನ್ನು ಕೈಬಿಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.6:17(2022)
**ವಿಷಯ:** NMR ಪ್ರಯೋಗಾಲಯದಲ್ಲಿರುವ ಉಪಕರಣಗಳ ಬಳಕೆಗೆ ದರ ಪರಿಷ್ಕರಿಸುವ ಬಗ್ಗೆ.
**ನಿರ್ಣಯ:** ದಿನಾಂಕ 23.06.2022ರಂದು ನಡೆದ ಸಮಿತಿ ಸಭೆಯ ನಡವಳಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ಸಾಸ.6:18(2022)
**ವಿಷಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಯ ಕ್ರೀಡಾ ಮೈದಾನವನ್ನು ಬಳಸಲು ಕರಾವಳಿ ಕ್ರಿಕೆಟ್ ಕ್ಲಿನಿಕ್ ಇವರಿಗೆ ನೀಡಿದ ಅನುಮತಿ ನವೀಕರಿಸುವ ಕುರಿತು.
**ನಿರ್ಣಯ:** ಪ್ರಸ್ತಾವನೆಯನ್ನು ಪರಿಶೀಲಿಸಲಾಯಿತು. ಕರಾರು ಪತ್ರವನ್ನು ಮರು ಪರಿಶೀಲಿಸಲು ಈ ಕೆಳಕಂಡ ಸಮಿತಿಯನ್ನು ರಚಿಸಲಾಯಿತು. ವರದಿಯನ್ನು ಕಾರ್ಯಸೂಚಿಯೊಂದಿಗೆ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

1. ಡಾ. ಜೆರಾಲ್ಡ್ ಸಂತೋಷ್ ಡಿ' ಸೋಜ, – ಅಧ್ಯಕ್ಷರು
   ಡೀನರು, ಶಿಕ್ಷಣ ನಿಕಾಯ ಹಾಗೂ
   ಮಾನ್ಯ ಸಿಂಡಿಕೇಟು ಸದಸ್ಯರು
2. ಶ್ರೀ ರವಿಚಂದ್ರ ಪಿ. ಎಂ. – ಸದಸ್ಯರು
   ಮಾನ್ಯ ಸಿಂಡಿಕೇಟು ಸದಸ್ಯರು
3. ಪ್ರೊ. ವಿಶ್ವನಾಥ – ಸದಸ್ಯರು
   ಪ್ರಾಧ್ಯಾಪಕರು, ಸ್ನಾತಕೋತ್ತರ ಅರ್ಥಶಾಸ್ತ್ರ
   ಅಧ್ಯಯನ ವಿಭಾಗ, ಹಾಗೂ ಮಾನ್ಯ ಸಿಂಡಿಕೇಟು ಸದಸ್ಯರು

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:19(2022)

**ವಿಷಯ:** ಡಾ. ಇಂದಿರಾ ಜೆ., ಸಹ ಪ್ರಾಧ್ಯಾಪಕರು, ಭೌತಶಾಸ್ತ್ರ ವಿಭಾಗ, ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇವರ ವರ್ಗಾವಣೆ ಬಗ್ಗೆ.

**ನಿರ್ಣಯ:** ಗಮನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:20(2022)

**ವಿಷಯ:** ಮಾನ್ಯ ಕರ್ನಾಟಕ ರಾಜ್ಯ ಉಚ್ಚ ನ್ಯಾಯಾಲಯದ ಮಧ್ಯಂತರ ಆದೇಶದನುಸಾರ ವಯೋನಿವೃತ್ತಿಯ ನಂತರ ಸೇವೆಯನ್ನು ಮುಂದುವರಿಸಿದ ಪ್ರಾಧ್ಯಾಪಕರಿಗೆ ಮುಂದುವರಿಸಿರುವ ಸೇವಾ ಅವಧಿಗೆ ವೇತನ ಪಾವತಿಸುವ ಬಗ್ಗೆ.

**ನಿರ್ಣಯ:** ಪ್ರಸ್ತಾವನೆಯನ್ನು ಚರ್ಚಿಸಲಾಯಿತು. ಈ ಬಗ್ಗೆ ಸರಕಾರದ ನಿರ್ದೇಶನದಂತೆ ಕ್ರಮಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:21(2022)

**ವಿಷಯ:** ಡಾ. ಸುರೇಶ್ ಎಂ., ಮಹಾರಾಜ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು ಇವರನ್ನು ಮಂಗಳೂರು ವಿಶ್ವವಿದ್ಯಾನಿಲಯ ಇಲ್ಲಿನ ಅರ್ಥಶಾಸ್ತ್ರ ವಿಭಾಗದ ಸಹ ಪ್ರಾಧ್ಯಾಪಕ ಹುದ್ದೆಗೆ ನಿಯೋಜಿಸುವುದಕ್ಕೆ ಸಂಬಂಧಿಸಿ ನಿರಾಕ್ಷೇಪಣಾ ಪತ್ರ ನೀಡುವ ಬಗ್ಗೆ.

**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯದ ಘಟಕ ಕಾಲೇಜಾದ ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿಗೆ ನಿಯೋಜನೆಯನ್ನು ನಿಯಮಾನುಸಾರ ಮಾಡುವ ಷರತ್ತಿನೊಂದಿಗೆ ನಿರಾಕ್ಷೇಪಣಾ ಪತ್ರ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:22(2022)

**ವಿಷಯ:** ಡಾ. ವಿಶ್ವನಾಥ ಟಿ., ಸಹಾಯಕ ಪ್ರಾಧ್ಯಾಪಕರು, ಸ್ನಾತಕೋತ್ತರ ವಸ್ತು ವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ಸಹಾಯಕ ಪ್ರಾಧ್ಯಾಪಕರು ಹಂತ 1 ರಿಂದ ಹಂತ 2ಕ್ಕೆ ಪದೋನ್ನತಿ ನೀಡುವ ಬಗ್ಗೆ ಸ್ಕ್ರೀನಿಂಗ್-ಕಂ-ಇವ್ಯಾಲ್ಯುವೇಶನ್ ಸಮಿತಿಯ ಶಿಫಾರಸ್ಸನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಸ್ಕ್ರೀನಿಂಗ್-ಕಂ-ಇವ್ಯಾಲ್ಯುವೇಶನ್ ಸಮಿತಿಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:23(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಘಟಕಕ್ಕೆ ವಿಶೇಷಾಧಿಕಾರಿಯನ್ನು ನೇಮಕ ಮಾಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:24(2022)

**ವಿಷಯ:** Draft Statutes Relating to Appointment and Promotion of Teachers and Other Academic Staff and Measures for the Maintenance of Standards in Higher Education in the Mangalore University, as per the UGC Rgulations, 2018ನ್ನು ಅನುಮೋದಿಸುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:25(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ತಾತ್ಕಾಲಿಕ ನೆಲೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಭಾವನೆಯನ್ನು ಮರುನಿಗದಿಪಡಿಸುವ ಸಮಿತಿ ನಡವಳಿಗಳ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:26(2022)

**ವಿಷಯ:** ಡಾ. ಎಂ. ಜಯಶಂಕರ್, ಪ್ರಾಧ್ಯಾಪಕರು, ಸ್ನಾತಕೋತ್ತರ ಸೂಕ್ಷ್ಮಾಣು ಜೀವವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಕೇಂದ್ರ, "ಜ್ಞಾನ ಕಾವೇರಿ", ಚಿಕ್ಕ ಅಳುವಾರ ಇವರ ಮೇಲಿನ ಆರೋಪಗಳ ಬಗ್ಗೆ ಇಲಾಖಾ ವಿಚಾರಣೆ – ವಿಚಾರಣಾ ವರದಿ ಕುರಿತು.

**ನಿರ್ಣಯ:** ವಿಚಾರಣಾ ವರದಿಯನ್ನು ಪರಿಶೀಲಿಸಲಾಯಿತು. ಸದರಿಯವರಿಗೆ ತಿಳುವಳಿಕೆ ಪತ್ರ ನೀಡಿ ಪ್ರಕರಣವನ್ನು ಮುಕ್ತಾಯಗೊಳಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:27(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆರೋಗ್ಯ ಕೇಂದ್ರಕ್ಕೆ ತಾತ್ಕಾಲಿಕ ನೆಲೆಯಲ್ಲಿ ವೈದ್ಯಾಧಿಕಾರಿಯನ್ನು ನೇಮಿಸುವ ಬಗ್ಗೆ.

**ನಿರ್ಣಯ:** ಆಯ್ಕೆ ಸಮಿತಿ ಸಭೆಯು ಆಯ್ಕೆಗೊಳಿಸಿದ ಅಭ್ಯರ್ಥಿಗೆ ನೇಮಕಾತಿ ಆದೇಶ ನೀಡಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.6:28(2022)

**ವಿಷಯ:** ಶೈಕ್ಷಣಿಕ ವರ್ಷ 2022–23 ರಿಂದ 2031–32ರವರೆಗೆ ವಿವೇಕಾನಂದ ಕಾಲೇಜ್ ಆಫ್ ಆರ್ಟ್ಸ್, ಸಾಯನ್ಸ್ ಆಂಡ್ ಕಾಮರ್ಸ್, ನೆಹರೂ ನಗರ, ಪುತ್ತೂರು, ದ.ಕ. ಎಂಬ ವಿದ್ಯಾಸಂಸ್ಥೆಗೆ ಸ್ವಾಯತ್ತ ಸ್ಥಾನಮಾನ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.6:29(2022)

**ವಿಷಯ:** ವಿಶ್ವವಿದ್ಯಾನಿಲಯ ಕಾಲೇಜು, ಮಂಗಳೂರು ಇಲ್ಲಿ ಶೈಕ್ಷಣಿಕ ವರ್ಷ 2022–23ನೇ ಸಾಲಿನಿಂದ ಬಿ.ಕಾಂ. ಕಾರ್ಯಕ್ರಮಕ್ಕೆ 60 ವಿದ್ಯಾರ್ಥಿ ಪರಿಮಿತಿಯೊಂದಿಗೆ ಶಾಶ್ವತ ಹೆಚ್ಚುವರಿ ವಿಭಾಗಕ್ಕೆ ಹಾಗೂ ಬಿ.ಬಿ.ಎ (Tourism & Travel) ಕಾರ್ಯಕ್ರಮಕ್ಕೆ 60 ಶಾಶ್ವತ ವಿದ್ಯಾರ್ಥಿ ಪರಿಮಿತಿ ನೀಡುವ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.6:30(2022)

**ವಿಷಯ:** ಮಹಿಳಾ ವಿದ್ಯಾರ್ಥಿಗಳಿಗೆ ಹೆರಿಗೆ ರಜೆ/ಮಕ್ಕಳ ಆರೈಕೆ ರಜೆಯನ್ನು ಒದಗಿಸುವ ಬಗ್ಗೆ ರಚಿಸಲಾದ ನಿಯಮಗಳ ಅನುಮೋದನೆ ಬಗ್ಗೆ.

**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.6:31(2022)
**ವಿಷಯ:** ಕಾಲೇಜುಗಳ/ವಿದ್ಯಾಸಂಸ್ಥೆಗಳ ತಾತ್ಕಾಲಿಕ ಸಂಯೋಜನೆಯ ಅನುಶಾಸನದ ಪರಿಷ್ಕರಣೆಯ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿ೯ವಿ:ಸಾಸ.6:32(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಮತ್ತು (University of Agder, Norway) ಇವರೊಂದಿಗೆ ಒಡಂಬಡಿಕೆ ಮಾಡಿಕೊಳ್ಳುವ ಪ್ರಸ್ತಾವನೆಯ ಅನುಮೋದನೆ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿ೯ವಿ:ಸಾಸ.6:33(2022)
**ವಿಷಯ:** ಪ್ರಸಾರಾಂಗ, ಮಂಗಳೂರು ವಿಶ್ವವಿದ್ಯಾನಿಲಯ – ಪದವಿ (ಮೊದಲ ಚತುರ್ಮಾಸ) ಪಠ್ಯಪುಸ್ತಕಗಳನ್ನು ಮುದ್ರಿಸುವ ಪ್ರಸ್ತಾವನೆ ಬಗ್ಗೆ.
**ನಿರ್ಣಯ:** ದಿನಾಂಕ 10.08.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:34(2022)
**ವಿಷಯ:** ಡಾ. ಅರಬಿ ಯು., ಅರ್ಥಶಾಸ್ತ್ರದ ಪ್ರಾಧ್ಯಾಪಕರು, ಫೀಲ್ಡ್ ಮಾರ್ಷಲ್ ಕೆ.ಎಂ. ಕಾರ್ಯಪ್ಪ ಕಾಲೇಜು, ಮಡಿಕೇರಿ ಇವರು ವರ್ಗಾವಣೆ ಕೋರಿ ಸಲ್ಲಿಸಿರುವ ಮನವಿಯ ಬಗ್ಗೆ.
**ನಿರ್ಣಯ:** ಮನವಿಯನ್ನು ಸಿಂಡಿಕೇಟು ನಿರಾಕರಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:35(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಲಿಯ ನಿರ್ದೇಶಕರನ್ನು ನೇಮಕ ಮಾಡುವ ಬಗ್ಗೆ.
**ನಿರ್ಣಯ:** ಮುಂದೂಡಲಾಯಿತು. ನಿರ್ದೇಶಕರು / ಪ್ರಭಾರ ನಿರ್ದೇಶಕರನ್ನು ನೇಮಕಾತಿ ಮಾಡುವವರೆಗೆ ಯೋಜನೆ, ಮೇಲ್ವಿಚಾರಣೆ ಮತ್ತು ಮೌಲ್ಯಮಾಪನ ಮಂಡಲಿಯ ನಿರ್ದೇಶಕ ಹುದ್ದೆಯ ಪ್ರಭಾರವನ್ನು ಮಾನ್ಯ ಕುಲಪತಿಗಳು ವಹಿಸಿಕೊಳ್ಳುವುದಾಗಿ ಸಭೆಗೆ ತಿಳಿಸಿದಾಗ ಸಭೆಯು ಅದರಂತೆ ಕ್ರಮಕೈಗೊಳ್ಳಬಹುದೆಂಬುದಾಗಿ ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಂಡಿಕೇಟು:ಸಾಸ.6:36(2022)
**ವಿಷಯ:** ಪ್ರೊ. ವಿಶ್ವನಾಥ, ಸಿಂಡಿಕೇಟು ಸದಸ್ಯರು ಸಲ್ಲಿಸಿರುವ ಪ್ರಸ್ತಾವನೆ ಬಗ್ಗೆ.
**ವಿಷಯ 1 :** ದಿನಾಂಕ 23.12.2016ರಂದು ಚೀಫ್ ಮ್ಯಾನೇಜರ್ T.F.C.E.C. ಬ್ರಾಂಚ್, ಬೆಂಗಳೂರು ಇವರು ಎಕ್ಸಿಕ್ಯೂಟಿವ್ ಇಂಜಿನಿಯರ್, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ ಬರೆದಿರುವ ಪತ್ರದ ಪ್ರಕಾರ ಮುಂದಿನ ಸೂಕ್ತ ಕ್ರಮಕ್ಕಾಗಿ ಸಂಬಂಧಿತ ಕಡತ ಮತ್ತು ಸೂಕ್ತ ದಾಖಲೆಗಳನ್ನು ಕುಲಸಚಿವರು ಸಭೆಗೆ ಮಂಡಿಸುವುದು.
**ನಿರ್ಣಯ:** ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

**ವಿಷಯ 2** ದಿನಾಂಕ 01.01.2015ರಿಂದ 31.07.2022ರ ವರೆಗಿನ ಮಂಗಳೂರು ವಿಶ್ವವಿದ್ಯಾನಿಲಯದ "Pension Fund" ನ ವಿವರಗಳನ್ನು ಸೂಕ್ತ ದಾಖಲೆಗಳೊಂದಿಗೆ ಸಭೆಗೆ ಮಂಡಿಸುವುದು.

**ನಿರ್ಣಯ** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿರುವ ಪಿಂಚಣಿ ಖಾತೆಗಳು, ದಿನಾಂಕ 01.01.2015ರಿಂದ 31.07.2022ರವರೆಗೆ ವಿಶ್ವವಿದ್ಯಾನಿಲಯ ನಿವೃತ್ತ ಸಿಬ್ಬಂದಿಗಳಿಗೆ ನೀಡಿರುವ ಪಿಂಚಣಿ ಮೊತ್ತ ಮತ್ತು ಸರಕಾರದಿಂದ ಮಂಜೂರಾಗಿರುವ ಪಿಂಚಣಿ ಅನುದಾನದ ಮೊತ್ತಗಳ ವಿಸ್ತೃತ ಮಾಹಿತಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

**ವಿಷಯ 3** 1.7.2014 ರಿಂದ 31.07.2022ರವರೆಗಿನ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಹೊರಗುತ್ತಿಗೆ ಮತ್ತು ತಾತ್ಕಾಲಿಕ ನೆಲೆಯಲ್ಲಿ ನೇಮಕಗೊಂಡಿರುವ ಬೋಧಕೇತರ ನೌಕರರ ವಿವರಗಳನ್ನು ವಿದ್ಯಾರ್ಹತೆ, ಹುದ್ದೆ, ಹುಟ್ಟಿದ ದಿನಾಂಕ ಅವರು ಬರುವ ಮೀಸಲಾತಿ ಪ್ರವರ್ಗ ಹಾಗೂ ಅವರ ವಿಳಾಸಗಳ ಸಹಿತ ದಾಖಲೆಗಳೊಂದಿಗೆ ಸಭೆಗೆ ಮಂಡಿಸುವುದು (ಮಂಜೂರಾದ ಹುದ್ದೆಗಳು ಮತ್ತು ಮಂಜೂರಾಗದ ಹುದ್ದೆಗಳ ಸಹಿತ)

**ನಿರ್ಣಯ** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಹೊರಗುತ್ತಿಗೆ ಆಧಾರದಲ್ಲಿ ನೇಮಕಗೊಂಡಿರುವ ಬೋಧಕೇತರ ನೌಕರರ ವಿವರಗಳನ್ನು ವಿದ್ಯಾರ್ಹತೆ, ಹುದ್ದೆ, ಹುಟ್ಟಿದ ದಿನಾಂಕ ಅವರು ಬರುವ ಮೀಸಲಾತಿ ಪ್ರವರ್ಗ ಹಾಗೂ ಅವರ ವಿಳಾಸಗಳನ್ನು ನಮೂದಿಸಿ, ಹೊರಗುತ್ತಿಗೆ ಮತ್ತು ತಾತ್ಕಾಲಿಕ ಸಿಬ್ಬಂದಿಗಳ ವಿವರಗಳ ಕಾರ್ಯಸೂಚಿಯನ್ನು ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪ.ಜಾ.ಪ.ಪಂ. ಘಟಕ:ಸಾಸ.6:37(2022)

**ವಿಷಯ:** ಶ್ರೀ ಕಮಲಾಕರ್ ವಿ ದವಲೇಕರ್, ಸಂಶೊಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರು ವಿದೇಶದಲ್ಲಿ ನಡೆಯುವ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಸಂಶೋಧನಾ ಪತ್ರಿಕೆಯನ್ನು ಮಂಡಿಸಲು ಅನುಮತಿ ಹಾಗೂ ಇದಕ್ಕೆ ಸಂಬಂಧಿಸಿ ತಗಲುವ ಆರ್ಥಿಕ ಸಹಾಯಧನ ನೀಡುವ ಬಗ್ಗೆ.

**ನಿರ್ಣಯ:** ಶ್ರೀ ಕಮಲಾಕರ್ ವಿ ದವಲೇಕರ್, ಸಂಶೊಧನಾ ವಿದ್ಯಾರ್ಥಿ, ಭೌತಶಾಸ್ತ್ರ ವಿಭಾಗ, ಇವರಿಗೆ ಅಂತರಾಷ್ಟ್ರೀಯ ಸಮ್ಮೇಳನದಲ್ಲಿ ಸಂಶೋಧನಾ ಪತ್ರಿಕೆ ಮಂಡಿಸಲು ಮುಂಗಡ ಮೊತ್ತ ರೂ.3,07,638.00 (ರೂಪಾಯಿ ಮೂರು ಲಕ್ಷದ ಏಳು ಸಾವಿರದ ಆರುನೂರ ಮೂವತ್ತೆಂಟು ಮಾತ್ರ)ವನ್ನು ಮಂಜೂರು ಮಾಡುವ ಪ್ರಸ್ತಾವನೆಯನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ಸಾಸ.6:38(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ವಿವಿಧ ಪರೀಕ್ಷೆಗಳಲ್ಲಿ ವಿದ್ಯಾರ್ಥಿಗಳು ನಡೆಸಿದ ಅವ್ಯವಹಾರಗಳ ಕಳೆದ ಐದು ವರ್ಷಗಳ ಅಂಕಿ–ಅಂಶಗಳನ್ನು ನೀಡುವ ಕುರಿತು.

**ನಿರ್ಣಯ:** ಪ್ರಸ್ತಾವನೆಯನ್ನು ಸಿಂಡಿಕೇಟು ಗಮನಿಸಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ಸಾಸ.6:39(2022)

**ವಿಷಯ:** ಪಿಹೆಚ್.ಡಿ. ಪದವಿ ಪ್ರದಾನ ಮಾಡಿದ ಬಗ್ಗೆ.

**ನಿರ್ಣಯ:** ಅವಗಾಹನಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:40(2022)

**ವಿಷಯ:** Construction of proposed class rooms and office for M.Sc. Chemistry and Kodava Studies at F.M.K.M.C. College, Madikeri, Kodagu Dist – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.1.37 ಕೋಟಿ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:41(2022)

**ವಿಷಯ:** Construction of Compound wall to the Boys Hostel Jnana Kavery PG Centre, Chikka Aluvara, Kodagu Dist.

ಅಂದಾಜು ಪಟ್ಟಿ ಮೊತ್ತ ರೂ.25.50 ಲಕ್ಷ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:42(2022)

**ವಿಷಯ:** Renovation of Principal quarters near Police Crime Branch office pertaining to F.M.K.M.C. College, Madikeri.

ಅಂದಾಜು ಪಟ್ಟಿ ಮೊತ್ತ ರೂ.19.00 ಲಕ್ಷ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:43(2022)

**ವಿಷಯ:** Proposed Galvalume sheet work to the passages at F.M.K.M.C.College Campus, Madikeri, Kodagu Dist–ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.51.50 ಲಕ್ಷ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:44(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿರುವ ಡಾ. ಪಿ. ದಯಾನಂದ ಪೈ ಮತ್ತು ಶ್ರೀ ಪಿ. ಸತೀಶ್ ಪೈ ಯಕ್ಷಗಾನ ಅಧ್ಯಯನ ಕೇಂದ್ರದ ಹೊರಾಂಗಣದಲ್ಲಿ ರಂಗಸ್ಥಳ ನಿರ್ಮಾಣ ಕಾಮಗಾರಿ.

ಅಂದಾಜು ಮೊತ್ತ ರೂ. 6.25 ಲಕ್ಷ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:45(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ವಿಜ್ಞಾನ ಸಂಕೀರ್ಣ ಕಟ್ಟಡದ ಮುಂಭಾಗದಲ್ಲಿ ಸಿಬ್ಬಂದಿಗಳ ಅನುಕೂಲಕ್ಕಾಗಿ ವಾಹನ ತಂಗುದಾಣವನ್ನು ನಿರ್ಮಿಸುವುದು – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.13.25 ಲಕ್ಷ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:46(2022)

**ವಿಷಯ:** Providing Interlock Tiles in front of MBA Block located at Mangalore University Campus **–** ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.64,50,000.00.

**ನಿರ್ಣಯ:** ಸದರಿ ಕಾಮಗಾರಿಗೆ Interlock ನ ಬದಲು ಕಾಂಕ್ರೀಟ್‌ನ್ನು ಅಳವಡಿಸುವ ಪ್ರಸ್ತಾವನೆಯನ್ನು ಕಟ್ಟಡ ಸಮಿತಿ ಸಭೆಗೆ ಮರುಮಂಡಿಸಿ, ನಂತರ ಸಿಂಡಿಕೇಟು ಸಭೆಗೆ ಮಂಡಿಸಲು ಕ್ರಮಕೈಗೊಳ್ಳಬೇಕೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:47(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಪಕ್ಕದಲ್ಲಿರುವ ಟೆಲಿಕಾಂ ಎಕ್ಸ್‌ಚೇಂಜ್ ಸಮೀಪದ ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸೇರಿದ ಖಾಲಿ ಇರುವ ಜಾಗಕ್ಕೆ ಭದ್ರತಾ ದೃಷ್ಟಿಯಿಂದ ಆವರಣ ಗೋಡೆ ನಿರ್ಮಿಸುವ ಬಗ್ಗೆ.

ಅಂದಾಜು ಮೊತ್ತ ರೂ. 17.65 ಲಕ್ಷಗಳು.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:48(2022)

**ವಿಷಯ:** Providing Car Shed to the MBA Block located at Mangalore University Campus – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.10,10,000.00.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:49(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದ ಆಡಳಿತ ಸೌಧ ಕಟ್ಟಡದ ಮುಂಭಾಗದಲ್ಲಿ ಸಿಬ್ಬಂದಿಗಳ ಅನುಕೂಲಕ್ಕಾಗಿ ವಾಹನ ತಂಗುದಾಣವನ್ನು ನಿರ್ಮಿಸುವುದು – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.11,70,000.00.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:50(2022)

**ವಿಷಯ:** Providing Interlock tile work for parking area at back side of Humanities block located at Mangalore University Campus – ಅಂದಾಜುಪಟ್ಟಿ ಅನುಮೋದನೆ ಬಗ್ಗೆ.

ಅಂದಾಜು ಮೊತ್ತ ರೂ.41,00,000.00.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:51(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯ ಆವರಣದಲ್ಲಿ ಸ್ವಾಮಿ ವಿವೇಕಾನಂದರವರ ಕಂಚಿನ ಪ್ರತಿಮೆಯನ್ನು ಸ್ಥಾಪಿಸಲು ಪ್ರತಿಮೆಯನ್ನು ಒದಗಿಸಿಕೊಡುವ ಕಾಮಗಾರಿಯ Expression of Interest (EOI)ನ ಅಂದಾಜುಪಟ್ಟಿಗೆ ಅನುಮೋದನೆ ಬಗ್ಗೆ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:52(2022)

**ವಿಷಯ:** Necessary Repairs and Maintenance work to the Centenary Building at University College, Mangalore – ಟೆಂಡರು ಅಂಗೀಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:53(2022)

**ವಿಷಯ:** Necessary Maintenance and Repairs to the Laboratories pertaining to Science Department at University College, Mangalore – Component 9 of R.U.S.A. 2.0 Grant **–** ಟೆಂಡರು ಅಂಗೀಕರಿಸುವ ಬಗ್ಗೆ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:54(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಆವರಣದಲ್ಲಿರುವ ಮಂಗಳ ಅಡಿಟೋರಿಯಂ ಕಟ್ಟಡದ ಮುಂಭಾಗದಲ್ಲಿ ಇಂಟರ್‌ಲಾಕ್ ಹಾಗೂ ನೀರಿನ ಚರಂಡಿ ಒದಗಿಸುವ ಕಾಮಗಾರಿ **–** ಹೆಚ್ಚುವರಿ ಪರಿಮಾಣ ಮತ್ತು ಹೆಚ್ಚುವರಿ ಐಟಂಗಳನ್ನೊಳಗೊಂಡ ಪರಿಷ್ಕೃತ ಅಂದಾಜುಪಟ್ಟಿಗೆ ಅನುಮೋದನೆ ನೀಡುವ ಬಗ್ಗೆ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಇಡಿ:ಸಾಸ.6:55(2022)

**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಸಂಬಂಧಿಸಿದ "ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರ, ಬೆಳಪು, ಉಡುಪಿ ಜಿಲ್ಲೆ" ಕಾಮಗಾರಿಗೆ ಸಂಬಂಧಿಸಿದ ಹೆಚ್ಚುವರಿ ಪರಿಮಾಣ ಹಾಗೂ ಹೆಚ್ಚುವರಿ ಐಟಂಗಳ ಅನುಮೋದನೆ ಬಗ್ಗೆ.

**ನಿರ್ಣಯ:** ದಿನಾಂಕ 20.08.2022ರಂದು ನಡೆದ ಕಟ್ಟಡ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

ಮುಂದುವರಿದು, ಕಾಮಗಾರಿಗೆ ಸಂಬಂಧಿಸಿ ಕಾಮಗಾರಿಯ ಗುಣಮಟ್ಟದ ಬಗ್ಗೆ ದೃಢೀಕರಣವನ್ನು ಕಾರ್ಯಕಾರಿ ಅಭಿಯಂತರರಿಂದ ಪಡೆದುಕೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಆಡಳಿತ:ಸಾಸ.6:56(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಎಲ್ಲಾ ವಿಭಾಗ/ಕಚೇರಿಗಳಿಗೆ ಪ್ರಿಂಟೆಡ್ ಲೇಖನ ಸಾಮಾಗ್ರಿಗಳನ್ನು ಖರೀದಿಸುವ ಬಗ್ಗೆ.
**ನಿರ್ಣಯ:** ದಿನಾಂಕ 22.08.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಎಸಿಸಿ:ಸಾಸ.6:57(2022)
**ವಿಷಯ:** ಶೈಕ್ಷಣಿಕ ವರ್ಷ 2022–23ನೇ ಸಾಲಿನಿಂದ ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರ ಬೆಳಪುನಲ್ಲಿ ಸ್ನಾತಕೋತ್ತರ ಕಾರ್ಯಕ್ರಮಗಳನ್ನು ಪ್ರಾರಂಭಿಸುವ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:58(2022)
**ವಿಷಯ:** ಡಾ. ಬಿ. ಹೆಚ್. ಶೇಖರ್, ಪ್ರಾಧ್ಯಾಪಕರು, ಗಣಕ ವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಇವರಿಗೆ ಸಂಶೋಧನಾ ಯೋಜನೆಯ ಕುರಿತು ಚರ್ಚೆಗಾಗಿ ನಾರ್ವೆಯ Agder University, Grimstad ಇಲ್ಲಿಗೆ ಭೇಟಿ ನೀಡಲು ಅನುಮತಿ ನೀಡುವ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.6:59(2022)
**ವಿಷಯ:** ವಿಶ್ವವಿದ್ಯಾನಿಲಯದ ಆರೋಗ್ಯ ಕೇಂದ್ರಕ್ಕೆ ಅಗತ್ಯವಿರುವ ಔಷಧಿಗಳನ್ನು ಖರೀದಿಸುವ ಬಗ್ಗೆ.
**ನಿರ್ಣಯ:** ದಿನಾಂಕ 22.08.2022ರಂದು ನಡೆದ ಖರೀದಿ ಸಮಿತಿ ಸಭೆಯ ಶಿಫಾರಸ್ಸನ್ನು ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ಸಾಸ.6:60(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ Genuineln Technologies Private Limited, ಚೆನ್ನೈ ಇವರ ಮೂಲಕ ಕೆರಿಯರ್ ಕ್ಲೌಡ್ ಯೋಜನೆಯನ್ನು ಅನಿಷ್ಠಾನಗೊಳಿಸುವ ಪ್ರಸ್ತಾವನೆಗೆ ಅನುಮೋದನೆ ನೀಡುವ ಬಗ್ಗೆ.
**ನಿರ್ಣಯ:** ಸದರಿ ಯೋಜನೆಯನ್ನು ವಿದ್ಯಾರ್ಥಿಗಳಿಗೆ ಕಡ್ಡಾಯಗೊಳಿಸದೆ ಒಡಂಬಡಿಕೆ ಮಾಡಿಕೊಳ್ಳುವ ಷರತ್ತಿನ ಮೇರೆಗೆ ಪ್ರಸ್ತಾವನೆಯನ್ನು ಅನುಮೋದಿಲಾಯಿತು. ಕರಡು ಒಡಂಬಡಿಕೆಯನ್ನು ಎಲ್ಲಾ ಸಿಂಡಿಕೇಟು ಸದಸ್ಯರುಗಳಿಗೆ ಇ–ಮೇಲ್ ಮೂಲಕ ಕಳುಹಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಡಿಇವಿ:ಸಾಸ.6:61(2022)
**ವಿಷಯ:** ವಿಶ್ವವಿದ್ಯಾನಿಲಯದಲ್ಲಿ Paperless Assignment Reports, Notes, Digital Library, Digital Circuler & Communication ಪ್ರಸ್ತಾವನೆ ಬಗ್ಗೆ.
**ನಿರ್ಣಯ:** ವಿಶ್ವವಿದ್ಯಾನಿಲಯದ ತಾಂತ್ರಿಕ ಪರಿಶೀಲನಾ ಸಮಿತಿ ಮುಂದೆ ಮಂಡಿಸಿ, ನಿಯಮಾನುಸಾರ ಜಾರಿಗೊಳಿಸಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಸಿಬ್ಬಂದಿ:ಸಾಸ.6:62(2022)
**ವಿಷಯ:** ಡಾ. ಐ.ಕೆ. ಮಂಜುಳಾ, ಸೂಕ್ಷ್ಮಾಣು ಜೀವವಿಜ್ಞಾನ ವಿಭಾಗ, ಮಂಗಳೂರು ವಿಶ್ವವಿದ್ಯಾನಿಲಯ ಸ್ನಾತಕೋತ್ತರ ಕೇಂದ್ರ ಇವರಿಗೆ ಕೆರಿಯರ್ ಅಡ್ವಾನ್ಸ್‌ಮೆಂಟ್ ಸ್ಕೀಂನಡಿಯಲ್ಲಿ ನೀಡಿರುವ ಪದೋನ್ನತಿ ದಿನಾಂಕವನ್ನು ಮರುನಿಗದಿಪಡಿಸಿದ ಸ್ಕ್ರೀನಿಂಗ್–ಕಂ–ಇವ್ಯಾಲ್ಯುವೇಶನ್ ಸಮಿತಿಯ ಶಿಫಾರಸ್ಸನ್ನು ಅನುಮೋದಿಸುವ ಬಗ್ಗೆ.
**ನಿರ್ಣಯ:** ವಿಸ್ತೃತ ಚರ್ಚೆಯ ಅಗತ್ಯವಿರುವುದರಿಂದ ಪ್ರಸ್ತಾವನೆಯನ್ನು ಮುಂದೂಡಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಪರೀಕ್ಷಾಂಗ:ಸಾಸ.6:63(2022)
**ವಿಷಯ:** ಮರುನೋದಂಣಿ ಮತ್ತು ಮಾರ್ಗದರ್ಶಕರ ಬದಲಾವಣೆಗೆ ವಿಶೇಷ ನೆಲೆಯಲ್ಲಿ ಅವಕಾಶ ನೀಡಲಾದ 16 ಮಂದಿ ಸಂಶೋಧನಾ ವಿದ್ಯಾರ್ಥಿಗಳಲ್ಲಿ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ–01ಕ್ಕೆ ಸೇರಿದ ವಿದ್ಯಾರ್ಥಿಗಳಿಗೆ ಶುಲ್ಕ ವಿನಾಯಿತಿ ನೀಡುವ ಕುರಿತು.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಾರ್ವತ್ರಿಕ:ಸಾಸ.6:64(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಹಾಗೂ ಸಂಶೋಧನಾ ವಿದ್ಯಾರ್ಥಿಗಳಿಗೆ ಸುರಕ್ಷತಾ ವಿಮಾ ಸೌಲಭ್ಯವನ್ನು ಒದಗಿಸುವ ಬಗ್ಗೆ.
**ನಿರ್ಣಯ:** ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ, ಸ್ನಾತಕೋತ್ತರ ಮತ್ತು ಸಂಶೋಧನಾ ವಿದ್ಯಾರ್ಥಿಗಳಿಗೆ ಈ ಶೈಕ್ಷಣಿಕ ವರ್ಷದಿಂದ ಅನ್ವಯವಾಗುವಂತೆ ಭಾರತ ಸರಕಾರದ ಮಾನ್ಯತೆ ಪಡೆದ ವಿಮಾ ಕಂಪನಿಗಳ ಮೂಲಕ ವಿಮಾ ಸೌಲಭ್ಯಗಳನ್ನು ಒದಗಿಸಲು ಕ್ರಮ ಕೈಗೊಳ್ಳಬಹುದೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.

**ಕಾರ್ಯಸೂಚಿ ಸಂಖ್ಯೆ:** ಡೀಇವಿ:ಸಾಸ.6:65(2022)
**ವಿಷಯ:** ರಾಷ್ಟ್ರೀಯ ಶಿಕ್ಷಣ ನೀತಿ 2020ರ ಅನುಸಾರ ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಅವಶ್ಯವಿರುವ MOOC Audio setup & FM Community Radio Station on turnkey basis ನಲ್ಲಿ ಅನುಷ್ಠಾನಗೊಳಿಸುವ ಬಗ್ಗೆ.
**ನಿರ್ಣಯ:** ಸರಕಾರದ ಅನುದಾನ ಬಿಡುಗಡೆ ಬಳಿಕ ಕ್ರಮಕೈಗೊಳ್ಳಬಹುದೆಂದು ನಿರ್ಣಯಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಹವಿ:ಸಾಸ.6:66(2022)
**ವಿಷಯ:** ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ online ಮೂಲಕ ಶುಲ್ಕ ಪಾವತಿಸಲು Gateway facilityಯನ್ನು ಅಳವಡಿಸುವ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಕಾರ್ಯಸೂಚಿ ಸಂಖ್ಯೆ:** ಸಿಡಿಸಿ:ಸಾಸ.6:67(2022)
**ವಿಷಯ:** ಶ್ರೀ ದುರ್ಗಾಪರಮೇಶ್ವರಿ ದೇವಳ ಪ್ರಥಮ ದರ್ಜೆ ಕಾಲೇಜು, ಕಟೀಲು, ಎಂಬ ವಿದ್ಯಾಸಂಸ್ಥೆಗೆ ಶೈಕ್ಷಣಿಕ ವರ್ಷ 2022–23ನೇ ಸಾಲಿನ ವಿಸ್ತರಣಾ ಸಂಯೋಜನೆ ಮಂಜೂರಾತಿ ಬಗ್ಗೆ.
**ನಿರ್ಣಯ:** ಅನುಮೋದಿಸಲಾಯಿತು.

**ಇತರ ವಿಷಯಗಳು:**

1. ಮಂಗಳೂರು ವಿಶ್ವವಿದ್ಯಾನಿಲಯದಲ್ಲಿ ಸೇವೆ ಸಲ್ಲಿಸುತ್ತಿರುವ ಶ್ರೀ ವಿಜಯ್ ಐ. ಮತ್ತು ಶ್ರೀ ರವಿಕುಮಾರ್ ಹೆಚ್.ಪಿ. ಇವರುಗಳಿಗೆ ಅರ್ಹತಾ ದಿನಾಂಕ 31.03.2005 ರಿಂದ ಪೂರ್ವಾನ್ವಯವಾಗುವಂತೆ ವೇತನ ನಿಗದಿಪಡಿಸಿದ್ದು ವೇತನ ವ್ಯತ್ಯಾಸದ ಮೊತ್ತವನ್ನು ಕೂಡ ದಿನಾಂಕ 31.03.2005 ರಿಂದಲೇ ಪಾವತಿಸಲು ಕ್ರಮ ಕೈಗೊಳ್ಳಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
2. ಮಂಗಳೂರು ವಿಶ್ವವಿದ್ಯಾನಿಲಯ ಮತ್ತು ಆಳ್ವಾಸ್ ಶಿಕ್ಷಣ ಪ್ರತಿಷ್ಠಾನ ಇದರ ಸಹಯೋಗದೊಂದಿಗೆ ಶೈಕ್ಷಣಿಕ ವರ್ಷ 2021–22ನೇ ಸಾಲಿನಲ್ಲಿ ದಿನಾಂಕ 01.01.2022ರಿಂದ ದಿನಾಂಕ 04.01.2022ರವರೆಗೆ ಆಳ್ವಾಸ್ ಕಾಲೇಜು, ಮೂಡಬಿದರೆ ಇಲ್ಲಿ ನಡೆದ ಅಖಿಲ ಭಾರತ ಅಂತರ ವಿಶ್ವವಿದ್ಯಾನಿಲಯದ ಪುರುಷರ ಅತ್ಲೆಟಿಕ್ಸ್ ಕ್ರೀಡಾಕೂಟಕ್ಕೆ ಮಂಗಳೂರು ವಿಶ್ವವಿದ್ಯಾನಿಲಯ ಮಂಜೂರು ಮಾಡಿದ ಮೊತ್ತ ರೂ.40,00,000.00(ರೂಪಾಯಿ ನಲವತ್ತು ಲಕ್ಷ ಮಾತ್ರ) ನ್ನು ಒಂದು ವಾರದ ಒಳಗೆ ಪಾವತಿಸಬೇಕೆಂಬುದಾಗಿ ಸಿಂಡಿಕೇಟು ನಿರ್ಣಯಿಸಿತು.
3. ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕ ಮತ್ತು ಸ್ನಾತಕೋತ್ತರ ಪರೀಕ್ಷಾ ಪ್ರಶ್ನೆ ಪತ್ರಿಕೆ ತಯಾರಿಕೆ ಬಗ್ಗೆ ಮಾರ್ಗಸೂಚಿ/SOPಗಳನ್ನು ತಯಾರಿಸಿ, ಮುಂದಿನ ಸಿಂಡಿಕೇಟು ಸಭೆಗೆ ಮಂಡಿಸಬೇಕೆಂಬುದಾಗಿ ನಿರ್ಣಯಿಸಲಾಯಿತು.

ಮಾನ್ಯ ಕುಲಸಚಿವರು, ಸದಸ್ಯರ ಸಲಹೆ ಸಹಕಾರಗಳಿಗೆ ಮತ್ತು ಮಂಗಳೂರು ವಿಶ್ವವಿದ್ಯಾನಿಲಯದ ಆರನೆಯ ಸಿಂಡಿಕೇಟು ಸಭೆಯನ್ನು "ಮಂಗಳೂರು ವಿಶ್ವವಿದ್ಯಾನಿಲಯದ ಸ್ನಾತಕೋತ್ತರ ಅಧ್ಯಯನ ಮತ್ತು ಅತ್ಯಾಧುನಿಕ ಸಂಶೋಧನಾ ಕೇಂದ್ರ, ಬೆಳಪು" ಇಲ್ಲಿ ಆಯೋಜಿಸಲು ಸಹಕರಿಸಿದ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸಿ ಸಭೆಯನ್ನು ಮುಕ್ತಾಯಗೊಳಿಸಿದರು.

ಕುಲಸಚಿವರು                                                ಕುಲಪತಿಗಳು.